ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 28–10–2021

# ಮಾಧ್ಯಮ ಆಹ್ವಾನ
## MEDIA INVITATION

**1. ಕರ್ನಾಟಕ ರಾಜ್ಯ ಪೊಲೀಸ್ ಮಹಾನಿರ್ದೇಶಕರಾದ ಪ್ರವೀಣ್ ಸೂದ್‌ಅವರಿಗೆ ಸೇವಾ ಕವಾಯಿತು**

ಉಪಸ್ಥಿತಿ:
ಎಸಿಪಿ / ಡಿ.ಎಸ್.ಪಿ / ಸಹಾಯಕ ಕಮಾಂಡೆಂಟ್ ಮತ್ತು ಮೇಲ್ಪಟ್ಟ ಹಿರಿಯ ಪೊಲೀಸ್ ಅಧಿಕಾರಿಗಳು

ದಿನಾಂಕ : 29–10–2021 ಶುಕ್ರವಾರ, ಸಮಯ: ಬೆಳಿಗ್ಗೆ 8.00 ಗಂಟೆಗೆ

ಸ್ಥಳ : ಕೆ.ಎಸ್.ಆರ್.ಪಿ ಕವಾಯಿತು ಮೈದಾನ, ಕೋರಮಂಗಲ, ಬೆಂಗಳೂರು.

2. **Karnataka State Bar Counicil & Advocates Association Bengaluru "Launch of Mega Vehicle Rally"**

Launch tha Mega Vehicle Rally :
Hon'ble Shri Justice Ritu Raj Awasthi
Chief Justice, High Court of Karnataka & Patron-in-Chief,
Karnataka State Legal Services Authority

Date : 29-10-2021 Friday, Time : 10.00 A.M.

Place : Near Central Portico, High Court of Karnataka, Bengaluru.

**3. ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯ ಜಾಲತಾಣ ಮತ್ತು ಲಾಂಛನ ಲೋಕಾರ್ಪಣೆ**

ಲೋಕಾರ್ಪಣೆ :
ಜೆ.ಸಿ. ಮಾಧುಸ್ವಾಮಿ,
ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರು

ದಿನಾಂಕ : 29–10–2021 ಶುಕ್ರವಾರ, ಸಮಯ: ಅಪರಾಹ್ನ 12.45 ಗಂಟೆಗೆ

ಸ್ಥಳ : ಕೊಠಡಿ ಸಂಖ್ಯೆ 313, 3ನೇ ಮಹಡಿ, ವಿಧಾನಸೌಧ, ಬೆಂಗಳೂರು.

**4. ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ ವತಿಯಿಂದ**
**ಜನಸ್ನೇಹಿ ವಿದ್ಯುತ್ ಸೇವೆಗಳ ಲೋಕಾರ್ಪಣೆ ಕಾರ್ಯಕ್ರಮ**

ಲೋಕಾರ್ಪಣೆ :
ಬಸವರಾಜ ಎಸ್ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ವಿ. ಸುನೀಲ್ ಕುಮಾರ್,
ಮಾನ್ಯ ಇಂಧನ ಸಚಿವರು, ಕರ್ನಾಟಕ ಸರ್ಕಾರ

ದಿನಾಂಕ: 29–10–2021 ಶುಕ್ರವಾರ, ಸಮಯ : ಸಂಜೆ 5–00 ಗಂಟೆಗೆ,

ಸ್ಥಳ: ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, w4 ಉಪವಿಭಾಗ, ರೇಸ್ ಕೋರ್ಸ್ ರಸ್ತೆ, ಆನಂದರಾವ್ ವೃತ್ತ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

**PRESS RELEASE**

**'ಪ್ರವಾಸೋದ್ಯಮ ಅಭಿವೃದ್ಧಿಗೆ ಅವಕಾಶಗಳ ಸದ್ವಿನಿಯೋಗ'**

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ):

ಸಾಂಸ್ಕೃತಿಕ ಹಾಗೂ ಪ್ರಾಕೃತಿಕ ವೈಭವಗಳಿಂದ ತುಂಬಿರುವ ಭಾರತ ದೇಶವನ್ನು ಪ್ರವಾಸೋದ್ಯಮ ನಕಾಶೆಯಲ್ಲಿ ಮುಂಚೂಣಿಯಲ್ಲಿ ಗುರುತಿಸಲ್ಪಡುವಂತೆ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಮನವಿ ಮೇರೆಗೆ ವಿದೇಶಗಳಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರವಾಸೋದ್ಯಮ ಅಧಿಕಾರಿಗಳನ್ನು ನೇಮಿಸಿ ದೇಶ ಪ್ರವಾಸೋದ್ಯಮದ ಸಂಭಾವ್ಯ ಅವಕಾಶಗಳನ್ನು ಸದ್ವಿನಿಯೋಗ ಪಡಿಸಿಕೊಳ್ಳಲು ಸಜ್ಜಾಗಿದೆ ಎಂದು ಕೇಂದ್ರ ಪ್ರವಾಸೋದ್ಯಮ ಹಾಗೂ ಸಂಸ್ಕೃತಿ ಸಚಿವ ಜಿ ಕಿಶನ್ ರೆಡ್ಡಿ ಹೇಳಿದರು.

ಇಂದು ಬೆಂಗಳೂರಿನ ತಾಜ್ ವೆಸ್ಟ್ ಎಂಡ್ ಹೋಟಲ್‌ನಲ್ಲಿ ಕೇಂದ್ರ ಪ್ರವಾಸೋದ್ಯಮ ಹಾಗೂ ಸಚಿವಾಲಯದಿಂದ ಆಯೋಜಿಸಲಾಗಿರುವ ಎರಡು ದಿನಗಳ ದಕ್ಷಿಣ ರಾಜ್ಯಗಳ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವರ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಅಧಿಕಾರಿಗಳು ಆಸ್ಟ್ರೇಲಿಯಾ, ಕೆನಡಾ, ಯು ಎಸ್ ಎ, ಫ್ರಾನ್ಸ್, ಜರ್ಮನಿ ಮತ್ತು ಗಲ್ಫ್ ದೇಶಗಳಲ್ಲಿ ಭಾರತದ ಪ್ರವಾಸೋದ್ಯಮ ಅಭಿವೃದ್ಧಿಗೆ ಕಾರ್ಯತತ್ಪರರಾಗಲಿದ್ದಾರೆ.

ಭಾರತ ಅದರಲ್ಲೂ ಮುಖ್ಯವಾಗಿ ದಕ್ಷಿಣ ಭಾರತದಲ್ಲಿ ಪರಿಸರ ಸ್ನೇಹಿ ಪ್ರವಾಸೋದ್ಯಮಕ್ಕೆ ವಿಫುಲ ಅವಕಾಶಗಳಿದ್ದು, ಕೊರೋನಾ ನಂತರ ಅಂತಾರಾಷ್ಟ್ರೀಯ ಪ್ರವಾಸೋದ್ಯಮ ಆರಂಭದ ಬಳಿಕ ಐದು ಲಕ್ಷ ಅಂತಾರಾಷ್ಟ್ರೀಯ ಪ್ರವಾಸಿಗರಿಗೆ ಫ್ರೀ–ವೀಸಾಗಳನ್ನು ನೀಡಲಾಗುವುದು ಹಾಗೂ 169 ದೇಶಗಳಿಗೆ ಇ– ವೀಸಾವನ್ನು ವಿಸ್ತರಿಸಲು ನಿರ್ಧರಿಸಲಾಗಿದೆ ಎಂದು ಅವರು ಹೇಳಿದರು.

ಸ್ವದೇಶ ದರ್ಶನ ಯೋಜನೆಯಡಿ ದಕ್ಷಿಣ ರಾಜ್ಯಗಳಿಗೆ 1,088 ಕೋಟಿ ರೂ.ಗಳ ವೆಚ್ಚದ 15 ಯೋಜನೆಗಳನ್ನು ಅನುಮೋದಿಸಲಾಗಿದೆ. ಸ್ಥಳೀಯ ಪ್ರವಾಸೋದ್ಯಮಕ್ಕೂ ಹೆಚ್ಚಿನ ಪ್ರೋತ್ಸಾಹ ನೀಡಲಾಗುವುದರ ಜೊತೆಗೆ ಸುಸ್ಥಿರ ಅಭಿವೃದ್ಧಿ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡಲಾಗುವುದು.

ಆಜಾದಿ ಕಾ ಅಮೃತ ಮಹೋತ್ಸವ ಕಾರ್ಯಕ್ರಮವೂ ಇದಕ್ಕೆ ಪೂರಕವಾಗಿಯೇ ನಡೆಯಲಿದೆ. ಇಲ್ಲಿ ನಮ್ಮ ಸ್ವಾತಂತ್ರ್ಯ ಹೋರಾಟಗಾರರ ಸ್ಮರಣೆಯ ಜೊತೆಗೆ ಪ್ರಾಚೀನ ಹೋರಾಟದ ಪ್ರದೇಶಗಳನ್ನು ಗುರುತಿಸಿ ಅಭಿವೃದ್ಧಿ ಪಡಿಸಲಾಗುವುದು. ತಜ್ಞರು ಹಾಗೂ ರಾಜ್ಯಗಳ ಜೊತೆ ಚರ್ಚಿಸಿ ರಾಷ್ಟ್ರೀಯ ಪ್ರವಾಸೋದ್ಯಮ ನೀತಿಯನ್ನು ಅನುಷ್ಠಾನಕ್ಕೆ ತರಲಾಗುವುದು ಎಂದು ತಿಳಿಸಿದರು.

ಪ್ರವಾಸೋದ್ಯಮದಿಂದ ಪ್ರತ್ಯಕ್ಷ ಹಾಗೂ ಪರೋಕ್ಷ ಉದ್ಯೋಗ ಸೃಷ್ಟಿಯಾಗುವುರಲ್ಲಿ ಇಂದು ಯಾವುದೇ ಸಂಶಯಗಳು ಉಳಿದಿಲ್ಲ; ಸಾಂಕ್ರಾಮಿಕದಿಂದಾಗಿ ಸಂಭವಿಸಿದ ಪ್ರವಾಸೋದ್ಯಮ ಅಭಿವೃದ್ಧಿ ಕುಸಿತವನ್ನು ನಿರ್ವಹಿಸಲು ಹೊಸ ಪ್ರಯೋಗಗಳನ್ನು ಹಾಗೂ ಪ್ಯಾಕೇಜ್‌ಗಳನ್ನು ಜಾರಿಗೆ ತರಲಾಗಿದೆ. ವ್ಯಾಕ್ಸಿನೇಷನ್ ಡ್ರೈವ್ ಸಹ ಭಾರತದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕವಾಗಿದೆ.

ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ ಎಲ್ ಮುರುಗನ್ ಅವರು, ಪ್ರವಾಸೋದ್ಯಮ ವಲಯದ ಅಭಿವೃದ್ಧಿಗೆ ಇಂದಿನ ಸಮ್ಮೇಳನ ಪೂರಕವಾಗಿದ್ದು, ಈ ವಲಯದಲ್ಲಿ ಹೂಡಿಕೆಗೆ ಯುವ ಉದ್ಯಮಿಗಳನ್ನು ಆಕರ್ಷಿಸಲು ತಂತ್ರಜ್ಞಾನ ಮತ್ತು ನವೀನ ಚಿಂತನೆಗಳನ್ನು ಅಳವಡಿಸಿಕೊಳ್ಳಲಾಗುವುದು. ಪ್ರವಾಸೋದ್ಯಮ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಅಗತ್ಯ ನೆರವನ್ನು ನೀಡುತ್ತಿದ್ದು, ಅದನ್ನು ರಾಜ್ಯಗಳು ಸದ್ಬಳಕೆ ಮಾಡಿಕೊಳ್ಳಬೇಕೆಂದರು.

ಕೋವಿಡ್‌ನಿಂದಾಗಿ ಪ್ರವಾಸೋದ್ಯಮ ಜಟಿಲ ಸವಾಲುಗಳನ್ನೆದುರಿಸಿದರೂ, ನಮ್ಮ ರಾಜ್ಯದಲ್ಲಿ ನಾಡಹಬ್ಬ ದಸರಾ ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ಆಚರಿಸಲ್ಪಟ್ಟಿತು. ರಾಜ್ಯದ ಶ್ರೀಮಂತ ಸಾಂಸ್ಕೃತಿಕ ಪರಂಪರೆ ಹಾಗೂ ವೈವಿಧ್ಯತೆಯಿಂದಾಗಿ ಕರ್ನಾಟಕ ಪ್ರವಾಸೋದ್ಯಮ ಭೂಪಟದಲ್ಲಿ ಗಮನೀಯ ಸ್ಥಾನ ಪಡೆಯಬೇಕೆಂಬುದು ರಾಜ್ಯ ಪ್ರವಾಸೋದ್ಯಮ ಇಲಾಖೆ ಗುರಿ ಎಂದು ರಾಜ್ಯ ಪ್ರವಾಸೋದ್ಯಮ ಸಚಿವರಾದ ಆನಂದ್ ಸಿಂಗ್ ಹೇಳಿದರು.

ಹಂಪಿ, ಪಟ್ಟದಕಲ್ಲು ಹಾಗೂ ಪಶ್ಚಿಮಘಟ್ಟಗಳು ಪಾರಂಪರಿಕ ತಾಣಗಳನ್ನು ಯುನೆಸ್ಕೊ ಪಟ್ಟಿಗೆ ಸೇರಿಸುವ ನಿಟ್ಟಿನಲ್ಲಿ ಶ್ರಮಿಸಲಾಗುತ್ತಿದೆ. ಪ್ರವಾಸೋದ್ಯಮ ಅಭಿವೃದ್ಧಿಯಿಂದ ರಾಜ್ಯದಲ್ಲಿ ಭವಿಷ್ಯದಲ್ಲಿ ಉದ್ಯೋಗ ಸೃಷ್ಟಿಗೂ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದರು.

ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ರಾಜ್ಯ ಸಚಿವ ಭಗವಂತ್ ಖೂಬಾ, ಕೇಂದ್ರ ಪ್ರವಾಸೋದ್ಯಮ ರಾಜ್ಯ ಸಚಿವ ಅಜೇಯ್ ಭಟ್, ಪುದುಚೇರಿ ಪ್ರವಾಸೋದ್ಯಮ ಸಚಿವರಾದ ಕೆ ಲಕ್ಷ್ಮಿನಾರಾಯಣನ್, ತೆಲಂಗಾಣ ಪ್ರವಾಸೋದ್ಯಮ ಸಚಿವರಾದ ವಿ ಶ್ರೀನಿವಾಸ ಗೌಡಗಾರು, ತಮಿಳುನಾಡಿನ ಪ್ರವಾಸೋದ್ಯಮ ಸಚಿವರ ಎಂ ಮತಿವೇದಾಂತನ್ ಅವರ್ಕಲ್, ಆಂದ್ರ ಪ್ರದೇಶದ ಎಂ. ಶ್ರೀನಿವಾಸ್ ರಾವ್ ವೇದಿಕೆಯಲ್ಲಿದ್ದರು.

ಕೇಂದ್ರ ಪ್ರವಾಸೋದ್ಯಮ ಇಲಾಖೆಯ ಮಹಾ ನಿರ್ದೇಶಕರಾದ ಕಮಲ ವರ್ಧನ್ ರಾವ್ ಸ್ವಾಗತಿಸಿದರು.

## ಪಟಾಕಿ ಬಳಕೆ ಬಗ್ಗೆ ಅರಿವು ಮೂಡಿಸಲು ನವೆಂಬರ್ 2 ರಂದು ಸಾರ್ವಜನಿಕ ಜಾಗೃತಿ ಜಾಥಾ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ):

ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು, ಗೃಹ ರಕ್ಷಕದಳ, ಪೌರರಕ್ಷಣೆ ಮತ್ತು ರಾಜ್ಯ ವಿಪತ್ತು ಸ್ಪಂದನಾ ಪಡೆ ಇಲಾಖೆಗಳ ವತಿಯಿಂದ ದೀಪಾವಳಿ ಹಬ್ಬದ ಪ್ರಯುಕ್ತ ಪಟಾಕಿ ಬಳಕೆಯಿಂದ ಸಂಭವಿಸುವ ಅಗನಿ ಅನಾಹುತಗಳನ್ನು ತಪ್ಪಿಸಲು ಹಾಗೂ ಸಾರ್ವಜನಿಕರ ಪ್ರಾಣ ಮತ್ತು ಆಸ್ತಿ ಉಳಿಸುವ ಸಲುವಾಗಿ ಹಾಗೂ ಪರಿಸರ ಮತ್ತು ಮತ್ತು ಆರೋಗ್ಯದ ಮೇಲೆ ಉಂಟಾಗುವ ಹಾನಿ ಕುರಿತು ಅರಿವು ಮೂಡಿಸಲು "ಸಾರ್ವಜನಿಕ ಜಾಗೃತಿ ಜಾಥಾ–2021" ನ್ನು ನವೆಂಬರ್ 2 ರಂದು ಬೆಳಿಗ್ಗೆ 11 ಗಂಟೆಗೆ ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾಗಿದೆ

ಜಾಥಾ ವಿಧನೌಧದಿಂದ  ಪ್ರಾರಂಭಿಸಿ ಕೆ.ಆರ್.ಸರ್ಕಲ್, ಕಾರ್ಪೋರೇಷನ್ ವೃತ್ತ, ಸಿಟಿ ಮಾರುಕಟ್ಟೆ, ಕೆ.ಆರ್.ರಸ್ತೆ ಮೂಲಕ ಬಸವನಗುಡಿಯ ನ್ಯಾಷನಲ್ ಕಾಲೇಜ್ ಮೈದಾನದಲ್ಲಿ ಮುಕ್ತಾಯಗೊಳ್ಳುವುದು.

## ಡಿಸೆಂಬರ್ 18 ರಂದು ರಾಜ್ಯಾದ್ಯಂತ "ರಾಷ್ಟ್ರೀಯ ಲೋಕ್-ಅದಾಲತ್"

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ):

ರಾಜ್ಯಾದ್ಯಂತ ರಾಷ್ಟ್ರೀಯ ಲೋಕ್ ಅದಾಲತ್ ಕಾರ್ಯಕ್ರಮವನ್ನು ಡಿಸೆಂಬರ್ 18 ರಂದು ಹಮ್ಮಿಕೊಳ್ಳಲಾಗಿದೆ. ಈ ಲೋಕ್ ಅದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ  ಪ್ರಕರಣಗಳನ್ನು ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದಲ್ಲಿ ಮುಂಚಿತವಾಗಿ ಸಂಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು.

ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಪ್ರಕರಣ ನಡೆಯುತ್ತಿರುವ ನ್ಯಾಯಾಲಯಕ್ಕೆ ಪ್ರಕರಣ ರಾಜೀ ಮಾಡಿಕೊಳ್ಳುವ ಕುರಿತು ತಿಳಿಸುವ ಮೂಲಕ ಅಥವಾ ಅರ್ಜಿ ಸಲ್ಲಿಸುವ ಮೂಲಕ ಪ್ರಕರಣ ಇತ್ಯರ್ಥಪಡಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ website: www.kslsa.kar.nic.in ಅಥವಾ ನಿಮ್ಮ ಹತ್ತಿರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಿಗಳು ಅಥವಾ ತಾಲ್ಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳನ್ನು ಅಥವಾ ಸಹಾಯವಾಣಿ ಸಂಖ್ಯೆ : 1800-425-90900 ನ್ನು ಸಂಪರ್ಕಿಸಬಹುದೆಂದು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹೆಚ್. ಶಶಿಧರ ಶೆಟ್ಟಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವಾಸೋದ್ಯಮ ಪುನಃಶ್ಚೇತನಕ್ಕೆ ಅಗತ್ಯ ಕ್ರಮ
## – ಕೇಂದ್ರ ಪ್ರವಾಸೋದ್ಯಮ ಸಚಿವ ಜಿ. ಕಿಶನ್‌ರೆಡ್ಡಿ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ):

ವಿಶ್ವದಾದ್ಯಂತ ಕೋವಿಡ್ – 19 ಸಾಂಕ್ರಾಮಿಕ ಉಲ್ಬಣಿಸಿರುವ್ಯದರಿಂದ ಇಡೀ ಜಗತ್ತಿನಲ್ಲಿ ಪ್ರವಾಸೋದ್ಯಮ ತೀರ ತಳ ಮಟ್ಟಕೆ  ಕುಸಿದಿದೆ. ಪ್ರವಾಸೋದ್ಯಮ ಕ್ಷೇತ್ರವನ್ನು ಭಾರತದಲ್ಲಿ ಮತ್ತೆ ಪುನಃಶ್ಚೇತನಗೊಳಿಸಲು ಬೇಕಾದ ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಕೇಂದ್ರ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವ ಜಿ. ಕಿಶನ್‌ರೆಡ್ಡಿ ತಿಳಿಸಿದರು.

ಬೆಂಗಳೂರಿನ ತಾಜ್ ವೆಸ್ಟ್‌ಎಂಡ್ ಹೋಟಲ್‌ನಲ್ಲಿ ಆಯೋಜಿಸಲಾಗಿರುವ ದಕ್ಷಿಣ ಭಾರತದ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವರ ಸಮ್ಮೇಳನದ ನಂತರ ಮಾಧ್ಯಮ ಮಿತ್ರರೊಂದಿಗೆ ಮಾತನಾಡಿದ ಸಚಿವರು, ಪ್ರವಾಸೋದ್ಯಮ ಕ್ಷೇತ್ರವನ್ನು ಅಭಿವೃದ್ಧಿಪಡಿಸುವ ಸಲುವಾಗಿ ಎಲ್ಲಾ ಇಲಾಖೆಗಳು, ಖಾಸಗಿ ಸಂಸ್ಥೆಗಳು, ಸಂಘ ಸಂಸ್ಥೆಗಳೊಂದಿಗೆ ಈಗಾಗಲೇ ಸಮಾಲೋಚನೆ ನಡೆಸಿ, ಹಲವಾರು ಸಭೆಗಳನ್ನು ಕರೆದು ಚರ್ಚಿಸಲಾಗಿದೆ ಎಂದು ತಿಳಿಸಿದರು.

ದೇಶದಲ್ಲಿ ಪ್ರವಾಸೊದ್ಯಮದ ಅಭಿವೃದ್ಧಿಗೆ ಸಂಬಂಧಿಸಿದಂತೆ ಈಗಾಗಲೇ North East – 8 ರಾಜ್ಯಗಳ ಸಮಾವೇಶವನ್ನು ಈಗಾಗಲೇ ನಡೆಸಿ ಮಾಹಿತಿಯನ್ನು ಪಡೆಯಲಾಗಿದೆ. ಅದರಂತೆ ಇಂದು ದಕ್ಷಿಣ ಭಾರತದ 8 ರಾಜ್ಯಗಳ ಸಮಾವೇಶವನ್ನು ಬೆಂಗಳೂರಿನಲ್ಲಿ ಇಂದು ಮತ್ತು ನಾಳೆ ಹಮ್ಮಿಕೊಳ್ಳಲಾಗಿದೆ. ಈ ಸಮಾವೇಶದಲ್ಲಿ ಎಂಟು ರಾಜ್ಯಗಳ ಪ್ರವಾಸೋದ್ಯಮ ಮತ್ತು ಸಂಸ್ಕೃತಿ ಸಚಿವರು, ಸಂಬಂಧಿಸಿದ ಇಲಾಖಾ ಕಾರ್ಯದರ್ಶಿಗಳು ಭಾಗವಹಿಸಲಿದ್ದಾರೆ. ಮಹತ್ವದ ಚರ್ಚೆಯ ನಂತರ ಪ್ರವಾಸೋದ್ಯಮ ಕ್ಷೇತ್ರದಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲು ಅಗತ್ಯ ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಶೀಘ್ರದಲ್ಲಿಯೇ ಡಿಜಿಟಲ್ ಪ್ರವಾಸೋದ್ಯಮದ ಬಗ್ಗೆ ಚರ್ಚಿಸುವ ಸಲುವಾಗಿ ಸಚಿವರುಗಳ ಸಭೆ ನಡೆಸಲಾಗುವುದು. ಪಾಶ್ಚಿಮಾತ್ಯ ದೇಶಗಳ ಹೆಚ್ಚು ಜನರನ್ನು ಆಕರ್ಷಿಸುವ ಪ್ರವಾಸಿ ತಾಣಗಳನ್ನು ಶೀಘ್ರದಲ್ಲಿಯೇ ಅಭಿವೃದ್ಧಿಪಡಿಸಲಾಗುವುದು. ಇದಕ್ಕಾಗಿ ಅಗತ್ಯ ಅನುದಾನವನ್ನು ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಲಾಗುವುದು ಎಂದು ತಿಳಿಸಿದರು.

ನಮ್ಮ ದೇಶದಲ್ಲಿ ಇದುವರೆಗೂ ಯಾವ ರಾಜ್ಯದಲ್ಲೂ ಸಹ ಪ್ರವಾಸೋದ್ಯಮ ಪಾಲಿಸಿ ಇಲ್ಲ. ಅದನ್ನು ಕೂಡಲೇ ಜಾರಿಗೆ ತರಲು ಕ್ರಮವಹಿಸಲಾಗುವುದು ಎಂದು ಕೇಂದ್ರ ಸಚಿವರು ತಿಳಿಸಿದರು.

ಈ ಸಮಯದಲ್ಲಿ ಭಾರತ ಸರ್ಕಾರದ ಪ್ರವಾಸೋದ್ಯಮ ರಾಜ್ಯ ಸಚಿವ ಅಜಯ್ ಭಟ್, ರಾಜ್ಯ ಪ್ರವಾಸೋದ್ಯಮ ಸಚಿವ ಆನಂದ್ ಸಿಂಗ್ ಒಳಗೊಂಡಂತೆ ಕೇಂದ್ರ ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

**ಛಾಯಾಚಿತ್ರ ಲಗತ್ತಿಸಿದೆ)**

**ನೇರ ಫೋನ್ ಇನ್ ಕಾರ್ಯಕ್ರಮ**

ಬೆಂಗಳೂರು, ಅಕ್ಟೋಬರ್ 26 (ಕರ್ನಾಟಕ ವಾರ್ತೆ):

**ಬೆಂಗಳೂರು ಜಲಮಂಡಳಿಯ ವತಿಯಿಂದ ದಿ:30-10-2021 ರ ಶನಿವಾರದಂದು ಬೆಳಗ್ಗೆ 09:00 ರಿಂದ 10:30 ರವರೆಗೆ ಎನ್.ಜಯರಾಮ್, ಭಾ.ಆ.ಸೇ., ಮಾನ್ಯ ಅಧ್ಯಕ್ಷರು, ಬೆಂಗಳೂರು ಜಲಮಂಡಳಿ ಇವರೊಂದಿಗೆ ನೇರ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ**. ಸಾರ್ವಜನಿಕರು ತಮ್ಮ ವಲಯ/ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಮತ್ತು ಒಳಚರಂಡಿ ಕೊಳವೆ/ಇಳ ಗುಂಡಿಯಿಂದ ತ್ಯಾಜ್ಯ ನೀರು ಹೊರಬರುತ್ತಿರುವ ಬಗ್ಗೆ, ಜಲಮಾಪನ ಹಾಗೂ ನೀರಿನ ಬಿಲ್ಲಿನ ಸಮಸ್ಯೆಯ ಬಗ್ಗೆ ನೇರವಾಗಿ ಮಾತನಾಡಿ ಕುಂದು-ಕೊರತೆಗಳನ್ನು ಬಗೆಹರಿಸಿಕೊಳ್ಳಲು ಈ ಫೋನ್-ಇನ್ ಕಾರ್ಯಕ್ರಮವನ್ನು ಸದುಪಯೋಗ ಪಡಿಸಿಕೊಳ್ಳಲು ಕೋರಲಾಗಿದೆ. ಸಾರ್ವಜನಿಕರು ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ; **080-22945119** ಅನ್ನು ಸಂಪರ್ಕಿಸಬಹುದು.

**ಛಾಯಾಚಿತ್ರ ಶೀರ್ಷಿಕೆ)**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ಜಂಟಿ ಸಮಾಲೋಚನಾ ಸಮಿತಿ ಸಭೆಯಲ್ಲಿ , ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಪ್ರಸ್ತಾಪಿಸಲ್ಪಟ್ಟ ಅಂಶಗಳ ಬಗ್ಗೆ ರಾಜ್ಯಾಧ್ಯಕ್ಷರಾದ ಷಡಾಕ್ಷರಿರವರು ಪರಿಣಾಮಕಾರಿಯಾಗಿ ಮಂಡಿಸಿ, ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದರು. ಸಭೆಯಲ್ಲಿ DPAR-ACS ಶ್ರೀಮತಿ ಅಮಿತಾ ಪ್ರಸಾದ್,DPAR-AR ಕಾರ್ಯದರ್ಶಿ ಮನೀಷ್ ಮೌದ್ಗಿಲ್- ಅಧಿಕಾರಿಗಳು, ಸಮಿತಿ ಸದಸ್ಯರು,ರಾಜ್ಯ ಸಂಘದ ಮಹಾಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಜಗದೀಶಗೌಡ ಪಾಟೀಲ ರು ಹಾಗೂ ಖಜಾಂಚಿಗಳಾದ ಶ್ರೀ ಶ್ರೀನಿವಾಸ್ ರು ಮತ್ತು ಇತರ ಪದಾಧಿಕಾರಿಗಳು ಭಾಗವಹಿಸಿ ಉಪಸ್ಥಿತರಿದ್ದರು.*

**ನೀರಿನ ಸಂಪರ್ಕ ಹೊಂದಿರುವ ಗ್ರಾಹಕರು ತಮ್ಮ ಆರ್.ಆರ್.ಸಂಖ್ಯೆಯನ್ನು ತಿಳಿಸಿ ದೂರನ್ನು ನೀಡಲು ಕೋರಲಾಗಿದೆ**.

**ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ನಿರಂತರ ಪರಿವೇಷ್ಠಕ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 28.10.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 109 | ಸಾಧಾರಣ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 114 | ಸಾಧಾರಣ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 174 | ಸಾಧಾರಣ | $PM_{2.5}$ |

| | | | | |
|---|---|---|---|---|
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 106 | ಸಾಧಾರಣ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 121 | ಸಾಧಾರಣ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 59 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 44 | ಉತ್ತಮ | CO |
| **(28.10.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 162 | ಸಾಧಾರಣ | $PM_{2.5}$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | 108 | ಸಾಧಾರಣ | $PM_{2.5}$ |

## Karnataka State Pollution Control Board

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 28.10.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 109 | Moderate | $PM_{10}$ |
| 2 | Jayanagar 5$^{th}$ Block, Shalini ground | 114 | Moderate | $PM_{2.5}$ |
| 3 | KAVIKA, Mysore Road | 174 | Moderate | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 106 | Moderate | $PM_{10}$ |
| 5 | HSR Layout, near Central Silkboard | 121 | Moderate | $PM_{10}$ |
| 6 | City Railway Station, Magestic, Bengaluru | 59 | Satisfactory | $PM_{10}$ |

| | | | | |
|---|---|---|---|---|
| 7 | Saneguruvanahalli, NisargaBhavan, KSPCB, Shivanagara | 44 | Good | CO |
| **(28.10.2021 at 10.05 AM)** | | | | |
| 8 | BWSSB, Kadabesanahalli | 162 | Moderate | $PM_{2.5}$ |
| 9 | Peenya | * | * | * |
| 10 | BTM Layout | 108 | Moderate | $PM_{2.5}$ |